ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಫಲಾನುಭವಿಗಳ ಆಯ್ಕೆ ಸಮಿತಿಗಳ ಕುರಿತು

ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

426 (580) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜಿಲ್ಲಾ ತಾಲ್ಲೂಕು ವ್ಯಾಪ್ತಿಯಲ್ಲಿರುವ ಆಯ್ಕೆ ಸಮಿತಿಗಳೆಷ್ಟು; ಇವುಗಳ ಕಾರ್ಯ ವ್ಯಾಪ್ತಿ ಏನು ಹಾಗೂ ಫಲಾನುಭವಿಗಳ ಆಯ್ಕೆಯ ಕುರಿತಂತೆ ವಿಸ್ತೃತವಾದ ಮಾಹಿತಿ ಒದಗಿಸುವುದು;

(ಆ) ಸಮಿತಿಗಳ ನೇಮಕಾತಿ ಕುರಿತಂತೆ ಅಧ್ಯಕ್ಷರು ಮತ್ತು ಸದಸ್ಯರ ಅಧಿಕಾರ ವ್ಯಾಪ್ತಿ/ಕಾರ್ಯ ವ್ಯಾಪ್ತಿ ಏನು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ/ತಾಲ್ಲೂಕು ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯರುಗಳ ವಿವರಗಳನ್ನೊಗೊಂಡಂತಹ ಪಟ್ಟಿಯೊಂದಿಗೆ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು?